# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ವಿಶೇಷ ಕೋಶ ಹಾಗೂ ಉನ್ನತಾಧಿಕಾರ ಸಮಿತಿಗೆ ಸಂಬಂಧಿಸಿದ ವಿಷಯಗಳನ್ನು ಸಂಶೋಧನಾ ಸಮಾಲೋಚಕರು ಮತ್ತು ಪದನಿಮಿತ್ತ ಅಪರ ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ, ಇವರು ನಿರ್ವಹಿಸುವ ಬಗ್ಗೆ.

ಉಲ್ಲೇಖ: 1. ದಿನಾಂಕ: 27.2.2008ರ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 29 ಎಸ್‌ಜಿಬಿ 2008.
2. ದಿನಾಂಕ: 16.1.2013ರ ಅಧಿಸೂಚನೆ ಸಂಖ್ಯೆ: ಪಿಡಿ 5 ಎಸ್‌ಪಿಬಿ 2013.

**ಪ್ರಸ್ತಾವನೆ:**

ದಿನಾಂಕ: 26.10.2008ರಂದು ಗುಲ್ಬರ್ಗಾದಲ್ಲಿ ನಡೆದ ಸಚಿವ ಸಂಪುಟದ ತೀರ್ಮಾನದಂತೆ ವಿಶೇಷ ಅಭಿವೃದ್ಧಿ ಯೋಜನೆಯ ಅನುಷ್ಠಾನವನ್ನು ಜಾರಿಗೆ ತರುವ ಸಲುವಾಗಿ ವಿಶೇಷ ಕೋಶ ಶಾಖೆಯನ್ನು ಯೋಜನಾ ಇಲಾಖೆಯಲ್ಲಿ ಸೃಜಿಸಲಾಗಿರುತ್ತದೆ.

ಡಾ: ಡಿ.ಎಂ. ನಂಜುಂಡಪ್ಪ ವರದಿಯನ್ನು ಅನುಷ್ಠಾನಗೊಳಿಸುವ ಸಲುವಾಗಿ ಉನ್ನತಾಧಿಕಾರ ಸಮಿತಿಯನ್ನು ಸೃಜಿಸಿ ಶ್ರೀ ತ್ರಿವಿಕ್ರಮ ಜೋಶಿ, ರಾಯಚೂರು, ಇವರನ್ನು ಸಮಿತಿಯ ಅಧ್ಯಕ್ಷರನ್ನಾಗಿ ನೇಮಕಾತಿ ಮಾಡಿ ಉಲ್ಲೇಖ (2)ರಲ್ಲಿ ಆದೇಶವನ್ನು ಹೊರಡಿಸಲಾಗಿರುತ್ತದೆ.

ಡಾ: ಡಿ.ಎಂ. ನಂಜುಂಡಪ್ಪ ವರದಿ ಅನುಷ್ಠಾನ ಉನ್ನತಾಧಿಕಾರ ಸಮಿತಿ ಹಾಗೂ ವಿಶೇಷ ಕೋಶ ಶಾಖೆಯ ಸಂಪೂರ್ಣ ಕಾರ್ಯ ನಿರ್ವಹಣೆಯನ್ನು ಸಕ್ರಿಯಗೊಳಿಸುವ ಉದ್ದೇಶದಿಂದ ಇದಕ್ಕೆ ಸಂಬಂಧಿಸಿದ ತಾಂತ್ರಿಕ ಹಾಗೂ ಆಡಳಿತಾತ್ಮಕ ಕಡತಗಳನ್ನು ವಿಶೇಷ ಕೋಶ ಶಾಖೆಯ ಜಂಟಿ ಕಾರ್ಯದರ್ಶಿಗಳಿಂದ ಸಂಶೋಧನಾ ಸಮಾಲೋಚಕರು ಮತ್ತು ಪದನಿಮಿತ್ತ ಅಪರ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಇವರ ಮುಖಾಂತರ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಇವರಿಗೆ ಸಲ್ಲಿಸಲು ದಿನಾಂಕ: 30.1.2013ರಂದು ಪ್ರಧಾನ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಲಾಗಿರುತ್ತದೆ.

**ಅದರಂತೆ ಈ ಆದೇಶ**

**ಸರ್ಕಾರದ ಆದೇಶ ಸಂಖ್ಯೆ: ಪಿಡಿ 12 ಎಸ್‌ಪಿಬಿ 2013, ಬೆಂಗಳೂರು, ದಿನಾಂಕ: 01.2.2013.**

ಡಾ: ಡಿ.ಎಂ. ನಂಜುಂಡಪ್ಪ ವರದಿ ಅನುಷ್ಠಾನ ಉನ್ನತಾಧಿಕಾರ ಸಮಿತಿ ಹಾಗೂ ವಿಶೇಷ ಕೋಶ ಶಾಖೆಗೆ ಸಂಬಂಧಿಸಿದ ತಾಂತ್ರಿಕ ಹಾಗೂ ಆಡಳಿತಾತ್ಮಕ ವಿಷಯಗಳ ಕಡತಗಳನ್ನು ವಿಶೇಷ ಕೋಶ ಶಾಖೆಯ ಜಂಟಿ ಕಾರ್ಯದರ್ಶಿಯವರು ಸಂಶೋಧನಾ ಸಮಾಲೋಚಕರು ಮತ್ತು ಪದನಿಮಿತ್ತ ಅಪರ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಇವರ ಮುಖಾಂತರ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಇವರಿಗೆ ಸಲ್ಲಿಸಲು ಈ ಮೂಲಕ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

1/2/2013

O/C

(ಉಷಾರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ ಎಸ್-3
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.
ದೂ: 22032623
planningboard122@gmail.com

**ಇವರಿಗೆ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.

. . . 2

2. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
3. ಸಂಶೋಧನಾ ಸಮಾಲೋಚಕರು ಮತ್ತು ಪದನಿಮಿತ್ತ ಅಪರ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ.
4. ಸರ್ಕಾರದ ಜಂಟಿ ಕಾರ್ಯದರ್ಶಿ, ವಿಶೇಷ ಕೋಶ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
5. ಡಾ: ಡಿ.ಎಂ. ನಂಜುಂಡಪ್ಪ ವರದಿ ಅನುಷ್ಠಾನ ಉನ್ನತಾಧಿಕಾರ ಸಮಿತಿಯ ಅಧ್ಯಕ್ಷರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.